Akashvani : Bangalore
National Bulletin In Kannada
10.04.2024 / 7.35 am

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

<><*<><>*><>

<u>ಮುಖ್ಯಾಂಶಗಳು</u>

೧. ಇಂದು ವಿಶ್ವ ಹೋಮಿಯೋಪಥಿ ದಿನ; ದೆಹಲಿಯಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರಿಂದ ಅಂತಾರಾಷ್ಟ್ರೀಯ ಸಮ್ಮೇಳನ ಉದ್ಘಾಟನೆ

೨. ಸಾರ್ವತ್ರಿಕ ಲೋಕಸಭಾ ಚುನಾವಣೆ; ರಾಜಕೀಯ ಪಕ್ಷಗಳ ಮುಖಂಡರಿಂದ ಅಭ್ಯರ್ಥಿಗಳ ಪರ ಬಿರುಸಿನ ಪ್ರಚಾರ

೩. ಕರ್ನಾಟಕದಲ್ಲಿಂದು ದ್ವಿತಿಯ ಪಿಯುಸಿ ಫಲಿತಾಂಶ ಪ್ರಕಟ

೪. ಐಪಿಎಲ್ ಟಿ-೨೦ ಕ್ರಿಕೆಟ್; ಸನ್ ರೈಸರ್ಸ್ ಹೈದರಾಬಾದ್ ತಂಡಕ್ಕೆ ಪಂಜಾಬ್ ಕಿಂಗ್ಸ್ ವಿರುದ್ಧ ೨ ರನ್ ಜಯ

<><*<><>*><>

ಇಂದು ವಿಶ್ವ ಹೋಮಿಯೋಪಥಿ ದಿನ. ಇದರ ಅಂಗವಾಗಿ ದೆಹಲಿಯಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು, ಎರಡು ದಿನಗಳ ಅಂತಾರಾಷ್ಟ್ರೀಯ ಸಮ್ಮೇಳನವನ್ನು ಉದ್ಘಾಟಿಸಲಿದ್ದಾರೆ. ಆಯುಷ್ಮಾನ್ ಭಾರತ್ ಸಚಿವಾಲಯ ಆಯೋಜಿಸಿರುವ ಈ ಸಮ್ಮೇಳನದಲ್ಲಿ ಹೋಮಿಯೋಪಥಿ ಸಂಶೋಧನೆ ಹಾಗೂ ವೈಜ್ಞಾನಿಕ ತಳಹದಿ ಕುರಿತಂತೆ ಹಲವಾರು ಸಂಶೋಧನಾ ಗ್ರಂಥವನ್ನು ಅನಾವರಣ ಮಾಡಲಿದ್ದಾರೆ ಎಂದು ಆಯುಷ್ಮಾನ್ ಸಚಿವಾಲಯದ ಕಾರ್ಯದರ್ಶಿ ವೈದ್ಯ ರಾಜೇಶ್ ಕೊಟೆಚಾ ಹೇಳಿದ್ದಾರೆ. ರಾಷ್ಟ್ರೀಯ ಹೋಮಿಯೋಪಥಿ ಸಂಘಟನೆ ಅಧ್ಯಕ್ಷ ಪದ್ಮಶ್ರೀ ಪ್ರಶಸ್ತಿ ಪುರಸ್ಕೃತ ಡಾ.ಅನಿಲ್ ಕುರಾನ ಅವರು, ಹೋಮಿಯೋಪಥಿ ಔಷಧ ಗುಣಮಟ್ಟ ಮತ್ತು ಮೂಲ ಸಂಶೋಧನೆ ಕುರಿತು ಹಲವು ಉಪನ್ಯಾಸಗಳನ್ನು ನೀಡಲಿದ್ದಾರೆ ಎಂದು ವರದಿಯಾಗಿದೆ. ವಿಶ್ವದ ಹಲವು ಭಾಗಗಳಿಂದ ಬಂದಿರುವ ಹೋಮಿಯೋಪಥಿ ವೈದ್ಯರು ಪ್ರಬಂಧ ಮಂಡಿಸಿ, ಅದರ ಸಂಶೋಧನೆ ಕುರಿತು ಯುವ ವೈದ್ಯರಿಗೆ ಮಾಹಿತಿ ನೀಡಲಿದ್ದಾರೆ ಎಂದು ಮೂಲಗಳು ತಿಳಿಸಿವೆ.

<><*<><>*><>

ಬಿಜೆಪಿಯ ಹಿರಿಯ ನಾಯಕ, ಪ್ರಧಾನಿ ನರೇಂದ್ರ ಮೋದಿ, ಇಂದು ತಮಿಳುನಾಡಿನ ವೆಲ್ಲೂರಿನಲ್ಲಿ ಚುನಾವಣಾ ರ್‍ಯಾಲಿಯನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ಮಿತ್ರಪಕ್ಷವಾದ ಪಿಎಂಕೆಯ ಧರ್ಮಪುರಿ ಅಭ್ಯರ್ಥಿ ಸೌಮ್ಯಾ ಅನ್ಬುಮಣಿ ಮತ್ತು ವೆಲ್ಲೂರಿನಲ್ಲಿ ಬಿಜೆಪಿ ಚಿಹ್ನೆಯಲ್ಲಿ ಸ್ಪರ್ಧಿಸುತ್ತಿರುವ ಮೈತ್ರಿ ಪಕ್ಷದ ಮತ್ತೊಬ್ಬ ನಾಯಕ ಎಸಿ ಷಣ್ಮುಗಂ ಅವರನ್ನು ಬೆಂಬಲಿಸಿ ಮೋದಿ ಪ್ರಚಾರ ನಡೆಸಲಿದ್ದಾರೆ. ನಂತರ ಅವರು, ಕೊಯಮತ್ತೂರು ಸಮೀಪದ ಮೆಟ್ಟುಪಾಳ್ಯಂ ತಲುಪಿ, ನೀಲಗಿರಿಯ ಬಿಜೆಪಿ ಅಭ್ಯರ್ಥಿ ಡಾ.ಎಲ್.ಮುರುಗನ್, ಕೊಯಮತ್ತೂರುನಲ್ಲಿ  ಕೆ.ಅಣ್ಣಾಮಲೈ ಮತ್ತು ಪೊಲ್ಲಾಚಿಯ  ಕೆ.ವಸಂತರಾಜನ್ ಅವರನ್ನು ಬೆಂಬಲಿಸಿ ಸಾರ್ವಜನಿಕ ಸಭೆಯನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ನಿನ್ನೆ ಚೆನ್ನೈನಲ್ಲಿ ನರೇಂದ್ರ ಮೋದಿ ರೋಡ್ ಶೋ ನಡೆಸಿದರು. ಚೆನ್ನೈನಲ್ಲಿ ನಡೆದ ರೋಡ್‌ಶೋ ದಕ್ಷಿಣ ಚೆನ್ನೈ ಮತ್ತು ಸೆಂಟ್ರಲ್ ಚೆನ್ನೈ ಎರಡೂ ಭಾಗಗಳನ್ನು ಒಳಗೊಂಡಿದೆ. ತಮಿಳಿಸೈ ಸೌಂದರರಾಜನ್ ಬಿಜೆಪಿಯ ದಕ್ಷಿಣ ಚೆನ್ನೈ ಅಭ್ಯರ್ಥಿಯಾಗಿದ್ದರೆ, ವಿನೋಜ್ ಪಿ ಸೆಲ್ವಂ ಅವರು ಸೆಂಟ್ರಲ್ ಚೆನ್ನೈನಿಂದ ಡಿಎಂಕೆಯ ದಯಾನಿಧಿ ಮಾರನ್ ಅವರನ್ನು ಎದುರಿಸುತ್ತಿದ್ದಾರೆ. ಬಿಹಾರದಲ್ಲಿ ಬಿಜೆಪಿ ಹಿರಿಯ ಮುಖಂಡ, ಗೃಹ ಸಚಿವ ಅಮಿತ್ ಶಾ, ಇಂದು ಗಯಾ ಜಿಲ್ಲೆಯ ಗುರಾರುದಲ್ಲಿ ಸಾರ್ವಜನಿಕ ಸಭೆ ನಡೆಸಲಿದ್ದಾರೆ. ಔರಂಗಾಬಾದ್ ಲೋಕಸಭಾ ಕ್ಷೇತ್ರದಿಂದ ಸ್ಪರ್ಧಿಸುತ್ತಿರುವ ಬಿಜೆಪಿ ಅಭ್ಯರ್ಥಿ ಸುಶೀಲ್ ಕುಮಾರ್ ಸಿಂಗ್ ಅವರನ್ನು ಬೆಂಬಲಿಸಿ ಸಾರ್ವಜನಿಕ ಸಭೆಯನ್ನು ಉದ್ದೇಶಿಸಿ ಮಾತನಾಡಲಿದ್ದಾರೆ.  ಡಿಎಂಕೆ ನಾಯಕ ಹಾಗೂ ತಮಿಳುನಾಡು ಮುಖ್ಯಮಂತ್ರಿ ಎಂ.ಕೆ.ಸ್ಟಾಲಿನ್ ಐ.ಎನ್.ಡಿ.ಐ.ಎ ಮೈತ್ರಿ ಕೂಟದ ಅಭ್ಯರ್ಥಿಗಳ ಪರ ಪ್ರಚಾರ ನಡೆಸಲಿದ್ದಾರೆ. ಮದುರೈನಲ್ಲಿ ನಡೆಯಲಿರುವ ಸಾರ್ವಜನಿಕರ ಸಭೆ ಉದ್ದೇಶಿಸಿ ಅವರು ಮಾತನಾಡಲಿದ್ದಾರೆ. ದೇಶಾದ್ಯಂತ ಸಮಾಜವಾದಿ ಪಕ್ಷ, ಬಿಎಸ್‌ಪಿ, ಬಿಜೆಪಿ, ಕಾಂಗ್ರೆಸ್, ಆಮ್‌ಆದ್ಮಿ ಪಕ್ಷ ಸೇರಿದಂತೆ ಪ್ರಾದೇಶಿಕ ನೊಂದಣಿ ಪಕ್ಷಗಳೂ ಸಹ ತಮ್ಮ ತಮ್ಮ ಅಭ್ಯರ್ಥಿಗಳ ಪರವಾಗಿ ಬಹಿರಂಗ ಪ್ರಚಾರ ನಡೆಸಲಿದ್ದಾರೆ ಎಂದು ವರದಿಯಾಗಿದೆ.

<><*<><>*><>

೨೦೨೪ ಸಾರ್ವತ್ರಿಕ ಚುನಾವಣೆ ಹಿನ್ನೆಲೆಯಲ್ಲಿ ವಿಶ್ವದ ಅತ್ಯಂತ ದೊಡ್ಡ ಪ್ರಜಾಪ್ರಭುತ್ವ ಹೊಂದಿರುವ ರಾಷ್ಟ್ರದಲ್ಲಿ ಆಧುನಿಕ ತಂತ್ರಜ್ಞಾನ ಬಳಕೆ ಮಾಡಿ, ಮುಕ್ತ, ನ್ಯಾಯಸಮ್ಮತ ಚುನಾವಣೆ ನಡೆಸಲು ಕೇಂದ್ರ ಚುನಾವಣಾ ಆಯೋಗ, ಹಲವಾರು ಉಪಕ್ರಮಗಳನ್ನು ಅಳವಡಿಸಿಕೊಂಡಿದೆ ಎಂದು ನಮ್ಮ ವಿಶೇಷ ಬಾತ್ಮೀದಾರರು ವರದಿ ಮಾಡಿದ್ದಾರೆ. ರಾಜಕೀಯ ಪಕ್ಷಗಳಿಂದ ಸ್ಪರ್ಧಿಸಿರುವ ಅಭ್ಯರ್ಥಿಗಳ ಸಂಪೂರ್ಣ ಮಾಹಿತಿಯನ್ನು ಚುನಾವಣಾ ಆಯೋಗದ ಆಪ್‌ನಲ್ಲಿ ಲಭ್ಯವಿರುವಂತೆ ಮಾಡಿದೆ. ಅಭ್ಯರ್ಥಿಗಳು ನಾಮಪತ್ರ ಸಲ್ಲಿಸಿದ ನಂತರ ಅವರು ನೀಡಿರುವ ಮಾಹಿತಿಗಳನ್ನು ಚುನಾವಣಾ ಆಯೋಗ ತನ್ನ ಜಾಲತಾಣದಲ್ಲಿ ವಿವರಗಳನ್ನು ತಕ್ಷಣವೇ ಪ್ರಕಟಿಸುತ್ತದೆ.

ಸಾರ್ವತ್ರಿಕ ಚುನಾವಣೆಯಲ್ಲಿ ಅಭ್ಯರ್ಥಿಗಳ ಪೂರ್ಣ ವಿವರಗಳು ಆಯೋಗದ ಜಾಲತಾಣದಲ್ಲಿ ಸಾರ್ವಜನಿಕರಗೆ ಲಭ್ಯವಿರುವಂತೆ ಮಾಡುವ ಉಪಕ್ರಮಗಳು ಆಧುನಿಕ ತಂತ್ರಜ್ಞಾನದ ಕೊಡುಗೆಯಾಗಿದೆ ಎಂದು ಉಲ್ಲೇಖಿಸಿದ್ದಾರೆ. ಚುನಾವಣಾ ಆಯೋಗದ ಜಾಲತಾಣದ ಮೂಲಕವೂ ಗೂಗಲ್ ಪ್ಲೇ ಅಥವಾ ಆಪ್‌ಲ್ ಆಪ್‌ನಲ್ಲಿ ಅಭ್ಯರ್ಥಿಗಳ ವಿವರಗಳು ತಕ್ಷಣವೇ ದೊರಯಲಿದೆ ಎಂದು ಆಯೋಗದ ಮೂಲಗಳನ್ನುಲ್ಲೇಖಿಸಿ ನಮ್ಮ ಬಾತ್ಮೀದಾರರು ವರದಿ ಮಾಡಿದ್ದಾರೆ. ಚುನಾವಣಾ ಆಯೋಗದ ಜಾಲತಾಣ ಮತದಾರರ ಸ್ನೇಹಿಯಾಗಿದ್ದು, ಮತದಾರರ ಸಂಪೂರ್ಣ ಮಾಹಿತಿಗಳು ಜಾಲತಾಣದಲ್ಲಿಯೂ ಲಭ್ಯವಾಗಲಿದೆ ಎಂದು ಆಯೋಗದ ಮೂಲಗಳು ತಿಳಿಸಿವೆ.

<><*<><>*><>

ಸಾರ್ವತ್ರಿಕ ಚುನಾವಣೆಯಲ್ಲಿ ಮತ ಚಲಾಯಿಸುವ ಮತ್ತು ಬೆರಳುಗಳಿಗೆ ಶಾಯಿ ಹಾಕಿಸಿಕೊಂಡ ವಿದ್ಯಾರ್ಥಿಗಳಿಗೆ ಪರೀಕ್ಷಾ ಕೊಠಡಿಗಳಿಗೆ ಪ್ರವೇಶಿಸುವುದನ್ನು ನಿರ್ಬಂಧಿಸಲಾಗುವುದಿಲ್ಲ ಎಂದು ರಾಷ್ಟ್ರೀಯ ಪರೀಕ್ಷಾ ಸಂಸ್ಥೆ -ಎನ್‌ಟಿಎ ಸ್ಪಷ್ಟಪಡಿಸಿದೆ. ಈ ಕುರಿತು ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿರುವ ಸಂದೇಶ ಸಂಪೂರ್ಣ ಆಧಾರ ರಹಿತವಾಗಿದೆ ಎಂದು ಹೇಳಿದೆ. ಬೆರಳುಗಳಿಗೆ ಶಾಯಿ ಹಾಕಿಸಿಕೊಂಡಂತಹ ವಿದ್ಯಾರ್ಥಿಗಳಿಗೆ ಪರೀಕ್ಷಾ ಕೊಠಡಿಗೆ ಪ್ರವೇಶ ನಿರ್ಬಂಧಿಸಲಾಗುವುದು ಎಂಬಂತಹ ಯಾವುದೇ ಸೂಚನೆಗಳು ಮತ್ತು ಮಾರ್ಗಸೂಚಿಗಳನ್ನು ನೀಡಿಲ್ಲ ಎಂದು ಎನ್‌ಟಿಎ ಹೇಳಿದೆ. ಇಂತಹ ವದಂತಿಗಳಿಗೆ ಗಮನ ಕೊಡಬೇಡಿ ಮತ್ತು ತಮ್ಮ ಮತದಾನದ ಹಕ್ಕನ್ನು ಚಲಾಯಿಸುವಂತೆ ಸಂಸ್ಥೆ ವಿದ್ಯಾರ್ಥಿಗಳಿಗೆ ತಿಳಿಸಿದೆ. ಅಭ್ಯರ್ಥಿಗಳು ತಮ್ಮ ಅಧ್ಯಯನದತ್ತ ಗಮನಹರಿಸಿ ಮುಂಬರುವ ಪರೀಕ್ಷೆಗೆ ತಯಾರಿ ನಡೆಸುವಂತೆ ಸಲಹೆ ನೀಡಿದೆ.

<><*<><>*><>

ಕರ್ನಾಟಕದಲ್ಲಿ ಕಳೆದ ಮಾರ್ಚ್ ೧ ರಿಂದ ನಡೆದ ದ್ವಿತಿಯ ಪಿಯುಸಿ ಪರೀಕ್ಷೆಯ ಫಲಿತಾಂಶ ಇಂದು ಬೆಳಿಗ್ಗೆ ೧೦ ಗಂಟೆಗೆ ಕರ್ನಾಟಕ ಪರೀಕ್ಷಾ ಮತ್ತು ಮೌಲ್ಯಮಾಪನ ಮಂಡಳಿ ಪ್ರಕಟಿಸಲಿದೆ. ರಾಜ್ಯಾದ್ಯಂತ ಈ ಬಾರಿ ೧ ಸಾವಿರದ ೧೨೪ ಕೇಂದ್ರಗಳಲ್ಲಿ ೬ ಲಕ್ಷ ೯೮ ಸಾವಿರಕ್ಕೂ ಹೆಚ್ಚು ವಿದ್ಯಾರ್ಥಿಗಳು ಪರೀಕ್ಷೆ ಬರೆದಿದ್ದರು. ವಿದ್ಯಾರ್ಥಿಗಳು ಮತ್ತು ಪೋಷಕರು ಶಿಕ್ಷಣ ಇಲಾಖೆಯ ವೆಬ್‌ಸೈಟ್ karresultsnic.in ಗೆ ಭೇಟಿ ನೀಡಿ ಫಲಿತಾಂಶವನ್ನು ವೀಕ್ಷಿಸಬಹುದು ಎಂದು ತಿಳಿಸಿದೆ.

<><*<><>*><>

೨೦೨೫-೨೦೩೦ರ ಅವಧಿಗೆ ಅಂತಾರಾಷ್ಟ್ರೀಯ ಮಾದಕ ದ್ರವ್ಯ ನಿಯಂತ್ರಣ ಮಂಡಳಿ - ಐಎನ್‌ಸಿಬಿಗೆ ಭಾರತದ ಜಗಜಿತ್ ಪವಾಡಿಯಾ ಮರು ಆಯ್ಕೆಯಾಗಿದ್ದಾರೆ. ವಿಶ್ವಸಂಸ್ಥೆಯ ಆರ್ಥಿಕ ಮತ್ತು ಸಾಮಾಜಿಕ ಮಂಡಳಿಯ - ಇಸಿಒಎಸ್‌ಒಸಿ ೫೩ ಮತದಾರ ಸದಸ್ಯರಲ್ಲಿ ೪೧ ಮತಗಳನ್ನು ಪಡೆದರು. ಅವರು ವಿಶ್ವಸಂಸ್ಥೆಗೆ ಭಾರತದ ಖಾಯಂ ಮಿಷನ್ ಮತ್ತು ವಿದೇಶಾಂಗ ವ್ಯವಹಾರಗಳ ಸಚಿವಾಲಯದ ತಂಡವನ್ನು ಅಭಿನಂದಿಸಿದ ವಿದೇಶಾಂಗ ವ್ಯವಹಾರಗಳ ಸಚಿವ ಎಸ್. ಜೈಶಂಕರ್, ಅಂತಾರಾಷ್ಟ್ರೀಯ ಮಾದಕ ದ್ರವ್ಯ ನಿಯಂತ್ರಣ ಮಂಡಳಿಗೆ ಎಲ್ಲಾ ಚುನಾಯಿತ ಸದಸ್ಯ ರಾಷ್ಟ್ರಗಳಲ್ಲಿ ಭಾರತ ಹೆಚ್ಚಿನ ಸಂಖ್ಯೆಯ ಮತಗಳನ್ನು ಪಡೆದುಕೊಂಡಿದೆ ಎಂದು ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಹೇಳಿದ್ದಾರೆ. ಪವಾಡಿಯಾ ಅವರು ೨೦೧೫ ರಿಂದ ಅಂತಾರಾಷ್ಟ್ರೀಯ ಮಾದಕ ದ್ರವ್ಯ ನಿಯಂತ್ರಣ ಮಂಡಳಿಯ ಸದಸ್ಯರಾಗಿದ್ದಾರೆ. ೨೦೧೯ರ ಮೇನಲ್ಲಿ ಅವರು ೨೦೨೦-೨೦೨೫ರ ಐದು ವರ್ಷಗಳ ಅವಧಿಗೆ ಮಂಡಳಿಯಿಂದ ಮರು-ಆಯ್ಕೆಯಾಗಿದ್ದರು. ೨೦೨೧-೨೦೨೨ರ ವರೆಗೆ ಮಂಡಳಿಯ ಅಧ್ಯಕ್ಷರಾಗಿಯೂ ಅವರು ಸೇವೆ ಸಲ್ಲಿಸಿದ್ದಾರೆ. ಮಂಡಳಿಯು ವಿಶ್ವಸಂಸ್ಥೆಯ ಅಂತಾರಾಷ್ಟ್ರೀಯ ಮಾದಕ ವಸ್ತು ನಿಯಂತ್ರಣಕ್ಕಾಗಿ ಅನುಷ್ಠಾನಗೊಂಡಿರುವ ಸ್ವತಂತ್ರ ಮತ್ತು ಅರೆ-ನ್ಯಾಯಾಂಗ ಮೇಲ್ವಿಚಾರಣಾ ಸಂಸ್ಥೆಯಾಗಿದೆ. ಇದು ಇಸಿಒಎಸ್‌ಒಸಿಯಿಂದ ಚುನಾಯಿತರಾದ ೧೩ ಸದಸ್ಯರನ್ನು ಒಳಗೊಂಡಿರುತ್ತದೆ.

<><*<><>*><>

ಭಾರತೀಯ ಕರಾವಳಿ ಪಡೆಯ -ಐಸಿಜಿ ಮಾಲಿನ್ಯ ನಿಯಂತ್ರಣ ನೌಕೆ ಸಮುದ್ರ ಪಹೆರೆದಾರ್ ನಿನ್ನೆ ಬ್ರೂನೈಯ ಮುವಾರಾಗೆ ತಲುಪಿತು. ೨೦೨೨ ರಲ್ಲಿ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಘೋಷಿಸಿದಂತೆ ಆಸಿಯಾನ್ ದೇಶಗಳಿಗೆ ಐಸಿಜಿ ವಿಶೇಷ ನೌಕೆಯ ಮೂರು ದಿನಗಳ ಭೇಟಿಯು ಸಮುದ್ರ ಮಾಲಿನ್ಯ ನಿಯಂತ್ರಣಕ್ಕಾಗಿ ಭಾರತ ಕೈಗೊಂಡಿರುವ ಆಸಿಯಾನ್ ಉಪಕ್ರಮದ ಅನುಸರಣೆಯಾಗಿದೆ. ಐಸಿಜಿಎಸ್ ಸಮುದ್ರ ಪಹೆರೆದಾರ್‌ನ ಸಿಬ್ಬಂದಿ ಸಾಗರ ಮಾಲಿನ್ಯ ಪ್ರತಿಕ್ರಿಯೆ, ಸಾಗರ ಹುಡುಕಾಟ ಮತ್ತು ಪಾರುಗಾಣಿಕೆ ಮತ್ತು ಬ್ರೂನಿ ಮಾರಿಟೈಮ್ ಏಜೆನ್ಸಿಗಳೊಂದಿಗೆ ಸಾಗರ ಕಾನೂನು ಜಾರಿಗಳ ಮೇಲೆ ಕೇಂದ್ರೀಕರಿಸುವ ವೃತ್ತಿಪರ ಸಂವಹನಗಳಲ್ಲಿ ತೊಡಗಿಸಿಕೊಳ್ಳಲಿದೆ ಎಂದು ರಕ್ಷಣಾ ಸಚಿವಾಲಯ ಹೇಳಿದೆ. ಇದೇ ವೇಳೆ ೨೫ ರಾಷ್ಟ್ರೀಯ ಕೆಡೆಟ್ ಕಾರ್ಪ್ಸ್ - ಎನ್‌ಸಿಸಿ ಸ್ಥಳೀಯ ಯುವ ಸಂಘಟನೆಗಳ ಸಹಯೋಗದೊಂದಿಗೆ ಸಮುದ್ರ ತೀರ ಸ್ವಚ್ಛತಾ ಚಟುವಟಿಕೆಗಳಲ್ಲಿ ಭಾಗವಹಿಸುವ ಮೂಲಕ ಸರ್ಕಾರದ ಉಪಕ್ರಮವಾದ ಪುನೀತ್ ಸಾಗರ್ ಅಭಿಯಾನಕ್ಕೆ ಕೊಡುಗೆ ನೀಡಲಿದೆ. ಈ ಭೇಟಿಯು ಭಾರತೀಯ ಕೋಸ್ಟ್ ಗಾರ್ಡ್ ಮತ್ತು ಬ್ರೂನೈ ಸಹವರ್ತಿಗಳ ನಡುವಿನ ಸಂಬಂಧವನ್ನು ಬಲಪಡಿಸಲು ಮಾತ್ರವಲ್ಲದೆ ಭಾರತದ ಹಡಗು ನಿರ್ಮಾಣ ಸಾಮರ್ಥ್ಯಗಳನ್ನು ಪ್ರದರ್ಶಿಸುವ ಗುರಿ ಹೊಂದಿದೆ.

ಜತೆಗೆ ಆತ್ಮನಿರ್ಭರ್ ಭಾರತ್ ಮತ್ತು ಮೇಕ್ ಇನ್ ಇಂಡಿಯಾ ಪರಿಕಲ್ಪನೆಯನ್ನು ಬೆಂಬಲಿಸುತ್ತದೆ ಎಂದು ಸಚಿವಾಲಯ ಪ್ರಕಟಣೆಯಲ್ಲಿ ತಿಳಿಸಿದೆ.

<><*<><>*><>

ಚಂಡೀಗಢದ ಮಹಾರಾಜ ಯದವೀಂದ್ರ ಸಿಂಗ್ ಕ್ರೀಡಾಂಗಣದಲ್ಲಿ ನೆನ್ನೆ ನಡೆದ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಸನ್‌ರೈಸರ್ಸ್ ಹೈದರಾಬಾದ್ ತಂಡವು ಪಂಜಾಬ್ ತಂಡವನ್ನು ಎರಡು ರನ್‌ಗಳಿಂದ ಮಣಿಸಿತು. ಮೊದಲು ಬ್ಯಾಟ್ ಮಾಡಿದ ಸನ್ ರೈಸರ್ಸ್ ಹೈದರಾಬಾದ್ ನಿಗದಿತ ೨೦ ಓವರ್‌ಗಳಲ್ಲಿ ೯ ವಿಕೆಟ್ ನಷ್ಟಕ್ಕೆ ೧೮೨ ರನ್ ಗಳಿಸಿತು. ೧೮೩ ರನ್‌ಗಳ ಗುರಿ ಬೆನ್ನತ್ತಿದ ಪಂಜಾಬ್ ಕಿಂಗ್ಸ್ ೨೦ ಓವರ್‌ಗಳಲ್ಲಿ ೬ ವಿಕೆಟ್ ನಷ್ಟಕ್ಕೆ ೧೮೦ ರನ್ ಗಳಿಸಲಷ್ಟೇ ಶಕ್ತವಾಯಿತು.

<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಅಪರಾಹ್ನ ೧.೧೦ ಕ್ಕೆ <>*><>